■ ತೋಂಟದಾರ್ಯ ವಿದ್ಯಾಪೀಠದ ಜ. ತೋಂಟದಾರ್ಯ ಪ್ರೌಢಶಾಲೆ

# ನೂತನ ಕಟ್ಟಡದ ಶಂಕುಸ್ಥಾಪನೆ

ಪ್ರಜಾಪಥ ವಾರ್ತೆ



**ಗದಗ: ನಗರದ ಪಿ.ಬಿ. ರಸ್ತೆಗೆ ಹೊಂದಿಕೊಂಡಿರುವ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ನಿವೇಶನದಲ್ಲಿ ಪೂಜ್ಯ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರ 5ನೇ ಪುಣ್ಯಸ್ಮರಣೋತ್ಸವದ ಅಂಗವಾಗಿ ತೋಂಟದಾರ್ಯ ಕನ್ನಡ ಮಾಧ್ಯಮ ಪ್ರೌಢಶಾಲೆಯ ನೂತನ ಕಟ್ಟಡದ ಶಂಕು ಸ್ಥಾಪನೆಯನ್ನು ವಿಧಾನ ಪರಿಷತ್ತಿನ ಸಭಾಪತಿಗಳಾದ ಬಸವರಾಜ ಹೊರಟ್ಟಿಯವರು ನೆರವೇರಿಸಿದರು.**

ಸಮಾರಂಭದ ಅಧ್ಯಕ್ಷತೆಯನ್ನು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಖಾತೆ ಹಾಗೂ ಪ್ರವಾಸೋದ್ಯಮ ಇಲಾಖೆಯ ಸಚಿವರಾದ ಎಚ್.ಕೆ. ಪಾಟೀಲ ವಹಿಸಿದ್ದರು. ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಸಾನಿಧ್ಯ ವಹಿಸಿ ಜಗದ್ಗುರು ತೋಂಟದಾರ್ಯ ಶಾಲೆಯು ಪೂಜ್ಯ ಲಿಂಗೈಕ್ಯ ಶ್ರೀಗಳು ಸ್ಥಾಪಿಸಿದ ಮೊದಲ ಶಾಲೆಯಾಗಿದೆ. ಈ ಶಾಲೆ ಗದಗ ನಗರದಲ್ಲಿ ಎಲ್ಲಾ ವರ್ಗದ ಮಕ್ಕಳಿಗೆ ವಿದ್ಯೆಯನ್ನು ನೀಡುವ ಪ್ರತಿಷ್ಠಿತ ಶಾಲೆಯಾಗಿದೆ. ಇಂದು ಶಾಲೆಯಲ್ಲಿ ಮಕ್ಕಳ ಸಂಖ್ಯೆ ಅಧಿಕವಾಗಿರುವುದರಿಂದ ನೂತನ ಕಟ್ಟಡದ ಶಂಕುಸ್ಥಾಪನೆಯನ್ನು ಪೂಜ್ಯರ ಪುಣ್ಯಸ್ಮರಣೆಯ ಅಂಗವಾಗಿ ನೆರವೇರಿಸಿರುವುದು ಲಿಂಗೈಕ್ಯ ಶ್ರೀಗಳ ಸಮಾಜಮುಖಿ ಕಾರ್ಯದ ಒಂದು ಭಾಗವಾಗಿದೆ ಎಂದರು.

ಭೈರನಹಟ್ಟಿಯ ಶಾಂತಲಿಂಗ ಮಹಾಸ್ವಾಮಿಗಳು, ಆಳಂದದ ತೋಂಟ ದಾರ್ಯ ಅನುಭವ ಮಂಟಪದ ಕೋರಣೇಶ್ವರ ಮಹಾಸ್ವಾಮಿಗಳು ಸಮ್ಮುಖ ವಹಿಸಿದ್ದರು.

ಮಾಜಿ ಸಚಿವರಾದ ಎಸ್.ಎಸ್. ಪಾಟೀಲ, ಮಾಜಿ ಶಾಸಕ ಡಿ. ಆರ್. ಪಾಟೀಲ, ಮಾಜಿ ಲೋಕಸಭಾ ಸದಸ್ಯ ಐ.ಜಿ. ಸನದಿ, ಗೃಹ ಇಲಾಖೆಯ ನಿವೃತ್ತ ಕಾರ್ಯದರ್ಶಿ ಡಾ. ಎಸ್.ಎಂ. ಜಾಮದಾರ, ಖ್ಯಾತ ಮನೋರೋಗ ತಜ್ಞರಾದ ಡಾ. ಆನಂದ ಪಾಂಡುರಂಗಿ, ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟರ, ಮೃತ್ಯುಂಜಯ ಸಂಕೇಶ್ವರ, ಗಂಗಾಧರ ಹಿರೇಮಠ, ಅಮರೇಶ ಅಂಗಡಿ, ಬಾಲಚಂದ್ರ ಭರಮಗೌಡ್ರ, ಲಿಂಗರಾಜ ಪಾಟೀಲ, ಗುರು ತಡಸದ, ಶೇಖಣ್ಣ ಕಳಸಾಪೂರ, ಡಾ. ಎಸ್.ಬಿ. ಶೆಟ್ಟರ, ಪ್ರಾಚಾರ್ಯ ಶಶಿಧರ ತೋಡಕರ ಮತ್ತು ಶಾಲೆಯ ಮುಖ್ಯೋಪಾಧ್ಯಾಯ ಕೊಟ್ರೇಶ ಮೆಣಸಿನಕಾಯಿ ಹಾಗೂ ಸಿಬ್ಬಂದಿ ವರ್ಗ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.